KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-132
ಮಂಗಳವಾರ 25 ಮಾರ್ಚ್ 2025
Price: 2.00 Rs. Pages - 2
RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಸಂಸದರು, ಮಾಜಿ ಸಂಸದರ ವೇತನ ಶೇ.24ರಷ್ಟು ಹೆಚ್ಚಳ!

ಬೆಂಗಳೂರು : ಕೇಂದ್ರ ಸರ್ಕಾರವು ಸಂಸದರು ಮತ್ತು ಮಾಜಿ ಸಂಸದರಿಗೆ ಭರ್ಜರಿ ಸಿಹಿ ಸುದ್ದಿ ನೀಡಿದೆ. ವೇತನ, ದಿನಭತ್ಯೆ, ಪಿಂಚಣಿ ಮತ್ತು ಹೆಚ್ಚುವರಿ ಪಿಂಚಣಿ ಹೆಚ್ಚಳ ಮಾಡಿ ಅಧಿಸೂಚನೆ ಹೊರಡಿಸಿದೆ. ಮಾಸಿಕ ವೇತನವನ್ನು ರೂ.1 ಲಕ್ಷದಿಂದ 1.24 ಲಕ್ಷಕ್ಕೆ ಹೆಚ್ಚಿಸಲಾಗಿದೆ.

ದಿನಭತ್ಯೆ ರೂ.2,000 ಗಳಿಂದ 2,500ಗೆ ಏರಿಕೆ ಮಾಡಲಾಗಿದೆದೆ. ಮಾಸಿಕ ಪಿಂಚಣಿಯನ್ನು ರೂ.25,000 ದಿಂದ ರೂ.31,000ಗಳಿಗೆ ಪರಿಷ್ಕರಣೆ ಮಾಡಲಾಗಿದೆ.

ವೇತನ ಹೆಚ್ಚಳದ ಜೊತೆಗೆ ಸಂಸತ್ತಿನ ಅಧಿವೇಶನಗಳು ಮತ್ತು ಅಧಿಕೃತ ಕರ್ತವ್ಯಗಳ ಮೇಲೆ ಆಗುವ ವೆಚ್ಚಗಳನ್ನು ಸರಿದೂಗಿಸಲು ಉದ್ದೇಶಿಸಲಾದ ಸಂಸದರ ದೈನಂದಿನ ಭತ್ಯೆ ದಿನಕ್ಕೆ ರೂ.2,000 ರಿಂದ ರೂ.2,500ಕ್ಕೆ ಹೆಚ್ಚಿಸಲಾಗಿದೆ.

## ಸಂತ್ರಸ್ತರಿಗೆ ನೆರವು ನೀಡಿ ಮಾನವೀಯತೆ

ಚಿಕ್ಕನಾಯಕನಹಳ್ಳಿ : ಬೆಂಕಿಯಿಂದ ಸಂಪೂರ್ಣ ಭಸ್ಮವಾದ ಅಲೆವಾರಿ ಕುಟುಂಬಗಳ ಗುಡಿಸಲುಗಳಿಗೆ ಪಟ್ಟಣದ ಶ್ರೀ ಮಹಾಲಕ್ಷ್ಮೀ ಮುದ್ದರಲಕ್ಕಮ್ಮ ದೇವಾಲಯದ ವತಿಯಿಂದ ಕುಟುಂಬಗಳಿಗೆ ಅಗತ್ಯ ದಿನನಿತ್ಯ ವಸ್ತುಗಳನ್ನು ನೀಡಿ ಧೈರ್ಯ ತುಂಬಿ ಮಾನವೀಯತೆ ಮೆರೆಯಲಾಯಿತು.

ತಾಲ್ಲೂಕಿನ ಹಂದನಕೆರೆ ಹೋಬಳಿ ಮತಿಘಟ್ಟದ ಕೈಮರದಲ್ಲಿ ನೆಲೆಸಿದ್ದ 15 ಅಲೆವಾರಿ (ಕೊರಮ) ಕುಟುಂಬಗಳ ಗುಡಿಸಲುಗಳಿಗೆ ಬೆಂಕಿ ತಗಲಿ ಸಂಪೂರ್ಣವಾಗಿ ಭಸ್ಮವಾಗಿ ಕುಟುಂಬಗಳು ಸಂಕಷ್ಟವನ್ನು ಅನುಭವಿಸಿದ್ದ ಕುಟುಂಬಗಳಿಗೆ ದೇವಾಲಯದ ಮುಖ್ಯಸ್ಥ ಶ್ರೀ ಲಕ್ಷ್ಮೀಶ್ ಹಾಗೂ ಕಾರ್ಯಕರ್ತರಾದ ಮೋಹಿತ್, ಮನೋಜ್, ಆಕಾಶ್ ಅಗತ್ಯ ವಸ್ತುಗಳನ್ನು ನೀಡಿ, ಸಾಂತ್ವಾನ ಹೇಳಿ ಧೈರ್ಯ ತುಂಬಲಾಯಿತು.

## 'ಯೋಗದಿಂದ ಏಕಾಗ್ರತೆ, ಆರೋಗ್ಯ'



ತುಮಕೂರು: ಯೋಗ ಮಾಡುವು ದರಿಂದ ಸದೃಢತೆ, ಏಕಾಗ್ರತೆ ಮತ್ತು ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಆದರೆ ಇಂದಿನ ಯುವಜನತೆ ಯೋಗದಿಂದ ಹಿಂದೆ ಸರಿಯುತ್ತಿದ್ದಾರೆ ಎಂದು ಯೋಗಪಟು ರಾಜೇಶ್ ಆಚಾರ್ ಹೇಳಿದರು.

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ದೈಹಿಕ ಶಿಕ್ಷಣ ವಿಭಾಗ ಸೋಮವಾರ ಹಮ್ಮಿಕೊಂಡಿದ್ದ ಅಂತರಕಾಲೇಜು ಸಾಂಪ್ರದಾಯಿಕ, ಕಲಾತ್ಮಕ ಮತ್ತು ಲಯಬದ್ಧ ಯೋಗದ ಕುರಿತ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು ಯೋಗ ಜೀವನದ ಅವಿಭಾಜ್ಯ ಅಂಗವಾಗಬೇಕು ಎಂದರು.

ಪ್ರಾಧ್ಯಾಪಕರಾದ ಪ್ರೊ. ಶ್ರೀನಿವಾಸ್ ಎಸ್. ಮಾತನಾಡಿ ಈಚಿನ ದಿನಗಳಲ್ಲಿ ಮನು?ನಿಗೆ ಹೆಚ್ಚು ಕಾಯಿಲೆಗಳು ಬರುವುದಕ್ಕೆ ನಮ್ಮ ಕಳಪೆ ಆಹಾರ ಪದ್ಧತಿಯೇ ಕಾರಣ. ಮಕ್ಕಳು ಜಂಕ್ ಫುಡ್‌ಗೆ ಆಕರ್ಷಿತರಾಗಿದ್ದಾರೆ. ಮಾರುಕಟ್ಟೆಯಲ್ಲಿ ಉತ್ಪಾದನೆಯಾಗುವ ಆಹಾರಗಳನ್ನು ಹೆಚ್ಚಾಗಿ ಸೇವಿಸುತ್ತೇವೆ. ಆದರೆ ಅದರ ಹಿಂದೆ ಕೊಟ್ಟಿರುವಂತಹ ವಿವರಗಳನ್ನು ನಾವು ಓದುವುದಿಲ್ಲ. ನಾವು ಭಾವಿಸಿದಂತೆ ಸಿದ್ಧ ಆಹಾರಗಳೆಲ್ಲವೂ ಶ್ರೇಷ್ಠವಲ್ಲ. ಅವುಗಳಲ್ಲಿ ಹೆಚ್ಚಿನ ರಾಸಾಯನಿಕಗಳನ್ನು ಬಳಸಲಾಗಿರುತ್ತದೆ. ಆದ್ದರಿಂದ ನಾವು ಏನು ತಿನ್ನಬೇಕು, ಏನು ತಿನ್ನಬಾರದು ಎಂಬುದನ್ನು ನಿರ್ಧರಿಸುವ ಸಾಮರ್ಥ್ಯವಿರಬೇಕು ಎಂದರು.

ಪ್ರಾಧ್ಯಾಪಕರಾದ ಡಾ. ಶಾಲಿನಿ ಬಿ.ಆರ್. ಮಾತನಾಡಿ, ವಿದ್ಯಾರ್ಥಿಗಳು ಕೇವಲ ತರಗತಿಗಳಿಗೆ ಸೀಮಿತವಾಗದೆ, ಪ್ರತಿದಿನ ಒಂದು ಗಂಟೆಯನ್ನಾದರೂ ಯೋಗಕ್ಕೆ ಮೀಸಲಿಡಬೇಕು. ಪ್ರತಿದಿನ ಅರ್ಧ ಗಂಟೆ ಧ್ಯಾನ ಮಾಡಬೇಕು. ಸೂರ್ಯ ನಮಸ್ಕಾರ ಮಾಡುವುದರಿಂದ ಉತ್ತಮ ಆರೋಗ್ಯ ಸಾಧ್ಯ. ಆರೋಗ್ಯಯುತ ಜೀವನಶೈಲಿಯನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ವಿಜ್ಞಾನ ಕಾಲೇಜಿನ ಪ್ರಾಂಶುಪಾಲ ಪ್ರೊ. ಪ್ರಕಾಶ್ ಎಂ. ಶೇಟ್ ಮಾತನಾಡಿ ನಮ್ಮ ದೇಹಕ್ಕೆ ಬೇಕಾದ ಆಹಾರವನ್ನು ಮಾತ್ರ ಸೇವಿಸಬೇಕು. ಅನಗತ್ಯ ಆಹಾರವನ್ನು ಸೇವಿಸುವುದರಿಂದ ಆರೋಗ್ಯ ಹದಗೆಡುತ್ತದೆ. ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಯುವಕರು ಜಿಮ್‌ಗೆ ಹೋಗುವ ಅಭ್ಯಾಸ ಬೆಳೆಸಿಕೊಂಡಿದ್ದಾರೆ. ಆದರೆ ಯೋಗವನ್ನು ಅಭ್ಯಾಸ ಮಾಡುವುದರಿಂದ ಮಿತವ್ಯಯದಲ್ಲಿ ಮನೆಯಲ್ಲೇ ಉತ್ತಮ ಆರೋಗ್ಯ ರೂಢಿಸಿಕೊಳ್ಳಬಹುದು ಎಂದರು.

ತುಮಕೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ವಿಭಾಗದ ಉಪನಿರ್ದೇಶಕ ಡಾ. ಎ.ಎಂ. ಮಂಜುನಾಥ ಉಪಸ್ಥಿತರಿದ್ದರು.

## 'ಹನಿಟ್ರ್ಯಾಪ್': ಸೂಕ್ತ ಸಮಯದಲ್ಲಿ ದೂರು



ತುಮಕೂರು: ಹನಿಟ್ರ್ಯಾಪ್ ಪ್ರಕರಣದ ಬಗ್ಗೆ ಸೂಕ್ತ ಸಮಯ ದಲ್ಲಿ ದೂರು ನೀಡಲಾಗುವುದು ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿಳಿಸಿದರು.

ದೂರು ನೀಡಲು ಸಮಯ ನಿಗದಿ ಮಾಡಿಕೊಂಡಿಲ್ಲ. ನಾನು ಮಧ್ಯಾಹ್ನದ ನಂತರ ಬೆಂಗಳೂರಿಗೆ ಹೋಗುತ್ತೇನೆ, ಆ ನಂತರ ಈ ಕುರಿತು ಪಕ್ಷದ ವರಿಷ್ಠರೊಂದಿಗೆ ಚರ್ಚಿಸಿ ಕೊಡುತ್ತೇನೆ ಎಂದು ಅವರು ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿರುವುದರಲ್ಲಿ ವಿಶೇಷತೆ ಏನಿದೆ, ಅವರಿಬ್ಬರು ಪರಸ್ಪರ ಆರೋಗ್ಯ ವಿಚಾರಣೆ ಮಾಡಿದ್ದಾರೆ. ಇದಕ್ಕೆ ಏನೇನೋ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದರು.

ಪ್ರತಿಪಕ್ಷ ಬಿಜೆಪಿಯವರು ಈ ಹನಿಟ್ರ್ಯಾಪ್ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಆಗ್ರಹಿಸುತ್ತಿ ರುವ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಆಯ್ತು.. ಆಯ್ತು.. ಅವರವರ ಅಭಿಪ್ರಾಯ ವನ್ನು ಅವರು ಹೇಳಿದ್ದಾರೆ. ಸೂಕ್ತ ಸಮಯದಲ್ಲಿ ನಾನು ದೂರು ಕೊಡು ತ್ತೇನೆ ಎಂದಷ್ಟೇ ಪ್ರತಿಕ್ರಿಯಿಸಿದರು.

ಶಾಸಕ ಮುನಿರತ್ನ ಅವರು ನೇರವಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಹನಿಟ್ರ್ಯಾಪ್‌ನಲ್ಲಿದ್ದಾರೆ ಎಂಬ ಬಗ್ಗೆ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಅದು ಅವರ ಅಭಿಪ್ರಾಯ. ಅದು ನನಗೆ ಗೊತ್ತಿಲ್ಲ ಎಂದ ಅವರು, ಮೊದಲು ಮುನಿರತ್ನರವರನ್ನೇ ಮಂಪರು ಪರೀಕ್ಷೆಗೆ ಒಳಪಡಿಸಬೇಕು. ಏಕೆಂದರೆ ಈ ಮೊದಲು ಅವರ ಜತೆಯಲ್ಲಿ ಬಹಳ ಹತ್ತಿರದಲ್ಲಿ ಇದ್ದವರು ಅವರು. ಹಾಗಾಗಿ ಅವರನ್ನೇ ಮಂಪರು ಪರೀಕ್ಷೆಗೆ ಒಳಪಡಿಸಲಿ ಎಂದರು.

## 'ಹನಿ' ಹಿಂದೆ ಹೋದವರು 'ಟ್ರ್ಯಾಪ್' ಆಗ್ತಾರೆ



ತುಮಕೂರು: ಹನಿ ಹುಡುಕಿಕೊಂಡು ಹೋದವರು ಟ್ರ್ಯಾಪ್ ಆಗುತ್ತಾರೆ, ನಾವು ಸುಮ್ಮನೆ ಇದ್ದರೆ ಯಾರು ಬಂದು ಟ್ರ್ಯಾಪ್ ಮಾಡುತ್ತಾರೆ ಎಂದು ಕೆಎಸ್ಸಾರ್ಟಿಸಿ ನಿಗಮದ ಅಧ್ಯಕ್ಷ ಹಾಗೂ ಗುಬ್ಬಿ ಶಾಸಕ ಎಸ್.ಆರ್. ಶ್ರೀನಿವಾಸ್ ಹೇಳಿದ್ದಾರೆ.

ಹನಿಟ್ರ್ಯಾಪ್ ಬಗ್ಗೆ ಹೆಚ್ಚಿನ ಮಾಹಿತಿ ನನಗೆ ಗೊತ್ತಿಲ್ಲ. ಒಟ್ಟಾರೆ ಹನಿ ಹುಡುಕಿಕೊಂಡು ಹೋದರೆ ಟ್ರ್ಯಾಪ್ ಆಗೋದು. ಅವರ ಮೇಲೆ ಟ್ರ್ಯಾಪ್ ಆಗಿದೆ ಎಂದರೆ ಅವರಿಗೆ ಗೊತ್ತಿರುತ್ತದೆ. ಅವರು ಹೋಗಿ ದೂರು ಕೊಟ್ಟರೆ ತನಿಖೆಯಾಗುತ್ತದೆ ಎಂದು ಅವರು ಪ್ರತಿಕ್ರಿಯಿಸಿದ್ದಾರೆ.

40–50 ಜನರು ಹನಿಟ್ರ್ಯಾಪ್ ಆಗಿದೆ ಎಂದರೆ ಅವರಿಗೆ ಗೊತ್ತಿರುತ್ತದೆ. ಅವರು ದೂರು ಕೊಡಲಿ. ಇಂತಹ ಘಟನೆ ಎಂದೂ ಆಗಬಾರದು. ಹನಿಟ್ರ್ಯಾಪ್‌ಗೆ ಪ್ರಯತ್ನಿಸಿದವರ ವಿರುದ್ಧ ಕ್ರಮ ಆಗಲಿ ಎಂದು ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಾ ಹೇಳಿದರು.

ಕಾಂಗ್ರೆಸ್ ನಾಯಕರೇ ಸದನದಲ್ಲಿ ಚೀಟಿ ನೀಡಿ ಮಾಹಿತಿ ಹೇಳಿಕೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ ಶಾಸಕ ಶ್ರೀನಿವಾಸ್ ಅವರು, ಈ ವಿಚಾರ ಕೂಡ ತನಿಖೆಯಾಗಬೇಕು. ಚೀಟಿ ಯಾರು ಯಾರಿಗೆ ಕೊಟ್ಟರು ಎನ್ನೋದು ತನಿಖೆಯಾಗಲಿ. ಹನಿಟ್ರ್ಯಾಪ್ ವಿಚಾರ ಪ್ರಸ್ತಾಪ ಆಗಿದ್ದ ದಿನ ನಾನು ಸದನದಲ್ಲಿ ಇರಲಿಲ್ಲ. ಈ ಹನಿಟ್ರ್ಯಾಪ್ ಚಾಳಿ ಅಂತ್ಯವಾಗಬೇಕು. ಎಲ್ಲರೂ ಹೋಗಿ ಕೋರ್ಟ್‌ನಲ್ಲಿ ತಡೆಯಾಜ್ಞೆ ತರುತ್ತಾರೆ. ರಮೇಶ್ ಜಾರಕಿಹೊಳಿಯವರು ಕೂಡಾ ನ್ಯಾಯಾಲಯಕ್ಕೆ ಹೋಗಿದ್ದರು ಎಂದರು.

ಇಂತಹದೆಲ್ಲಾ ತಾರ್ಕಿಕವಾಗಿ ಅಂತ್ಯವಾಗ ಬೇಕಾದರೆ ತನಿಖೆಯಾಗಬೇಕು, ಹನಿಟ್ರ್ಯಾಪ್ ವಿಚಾರ ತನಿಖೆಯಾಗಲಿ. ಉಪ್ಪು ತಿಂದವರು ನೀರು ಕುಡಿಯಲಿ ಎಂದು ಅವರು ಹೇಳಿದರು.

ಹನಿಟ್ರ್ಯಾಪ್ ವಿಚಾರ ಸದನದಲ್ಲಿ ಪ್ರಸ್ತಾಪ ಮಾಡುವ ಮುನ್ನ ಮುಖಂಡರಿಗೆ ಅರಿವಿರಬೇಕು. ಪಕ್ಷದ ಮುಖಂಡರು ಮಾತನಾಡುವ ಮುನ್ನ ಯೋಚಿಸಬೇಕಿತ್ತು. ಮೊದಲು ಸಿಎಂ ಜತೆ, ಗೃಹ ಸಚಿವರ ಜತೆ ಮಾತನಾಡಿ ದೂರು ಕೊಡಬಹುದಿತ್ತು. ಸದನದಲ್ಲಿ ಪ್ರಸ್ತಾಪ ಮಾಡಿರುವುದು ಅಷ್ಟರಮಟ್ಟಿಗೆ ಸರಿಯಿಲ್ಲ. ಸದನದಲ್ಲಿ ಈಗ ಗೌರವ ಕಳೆದುಕೊಂಡಿದೆ ಎಂದರು.

ಹನಿಟ್ರ್ಯಾಪ್ ವಿಚಾರವನ್ನು ಪಕ್ಷದ ಚೌಕಟ್ಟಿನಲ್ಲಿ ಚರ್ಚೆ ಮಾಡಬೇಕಿತ್ತು. ಹಾದಿ ರಂಪ, ಬೀದಿ ರಂಪ ಮಾಡಿದರೆ ಪಕ್ಷದ ಇಮೇಜ್ ಕಡಿಮೆಯಾಗುತ್ತದೆ. ಇದನ್ನು ಮುಖಂಡರು ಯೋಚಿಸಬೇಕಿತ್ತು ಎಂದರು.

## ಅಲ್ಪಸಂಖ್ಯಾತರ ಓಲೈಕೆ, ಬಹುಸಂಖ್ಯಾತರ ಹಿತ ತಿರಸ್ಕಾರ

### ಪತ್ರಿಭಟನೆಯಲ್ಲಿ ಕಾಂಗ್ರೆಸ್ ಸರ್ಕಾರದ ಧೋರಣೆ ವಿರುದ್ಧ ಶಾಸಕ ಜ್ಯೋತಿಗಣೇಶ್ ಕಿಡಿ



ತುಮಕೂರು: ರಾಜ್ಯ ಕಾಂಗ್ರೆಸ್ ಸರ್ಕಾರದ ಅಲ್ಪಸಂಖ್ಯಾತರ ತುಷ್ಟೀಕರಣ ಧೋರಣೆ ಮಿತಿ ಮೀರಿದೆ. ಹೀಗೇ ಮುಂದುವರೆದರೆ ರಾಜ್ಯ, ರಾಷ್ಟ್ರ ರಾಜಕಾರಣದ ಮೇಲೂ ಪರಿಣಾಮ ಬೀರಿ ಮುಂದೆ ರಾಷ್ಟ್ರೀಯ ಭದ್ರತೆಗೂ ಬೆದರಿಕೆವೊಡ್ಡುವ ಪರಿಸ್ಥಿತಿ ಬರಬಹುದು ಎಂದು ಶಾಸಕ ಜಿ.ಬಿ.ಜ್ಯೋತಿಗಣೇಶ್ ಎಚ್ಚರಿಕೆ ನೀಡಿದರು.

ಜಿಲ್ಲಾ ಬಿಜೆಪಿಯಿಂದ ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಶಾಸಕರು, ತಾವು ಹಿಂದುಳಿದ ವರ್ಗದವರ ಚಾಂಪಿಯನ್ ಎಂದು ಹೇಳಿಕೊಳ್ಳುವ ಸಿಎಂ ಸಿದ್ದರಾಮಯ್ಯ ಅವರು ಈ ವರ್ಗಗಳಿಗೂ ಅನ್ಯಾಯ ಮಾಡಿ, ಅಲ್ಪಸಂಖ್ಯಾತರ ಓಲೈಕೆ ಮಾಡುತ್ತಿದ್ದಾರೆ. ಎಸ್.ಸಿ, ಎಸ್.ಟಿ ಸಮುದಾಯಕ್ಕೆ ನೀಡಿದ್ದ ಅನುದಾಯವನ್ನು ಗ್ಯಾರಂಟಿ ಯೋಜನೆಗಳಿಗೆ ಕೊಟ್ಟಿದ್ದಾರೆ ಎಂದು ಟೀಕಿಸಿದರು.

ಮೊನ್ನೆಯ ಸದನದಲ್ಲಿ ಕ್ಯಾಬಿನೆಟ್ ಸಚಿವರು ತಮ್ಮ ಮೇಲೆ ಹನಿಟ್ರ್ಯಾಪ್ ಆಗಿದೆ ಎಂದು ಗೋಳಾಡಿದ್ದರು. ಗೃಹ ಸಚಿವರು ಪ್ರಕರಣದ ತನಿಖೆ ಮಾಡುವುದಾಗಿ ಹೇಳಿದ್ದರು. ಸರ್ಕಾರದ ಸಚಿವರ ವಿರುದ್ಧವೇ ನಡೆದ ಹನಿಟ್ರ್ಯಾಪ್ ವಿಚಾರ ಗಂಭೀರವಾದ್ದು, ಈ ಬಗ್ಗೆ ಮುಖ್ಯಮಂತ್ರಿಗಳು ವಿವರ ನೀಡಬೇಕು ಎಂದು ವಿಪಕ್ಷದವರು ಒತ್ತಾಯ ಮಾಡಿದರೂ ಉತ್ತರಿಸಲಿಲ್ಲ. ಕಾಂಗ್ರೆಸ್ ಪಕ್ಷದ ಏಜೆಂಟರಂತೆ ವರ್ತಿಸಿದ ಸ್ಪೀಕರ್ 18 ಬಿಜೆಪಿ ಶಾಸಕರನ್ನು ಆರು ತಿಂಗಳ ಕಾಲ ಅಮಾನತು ಮಾಡಿದರು. ಈ ಗೊಂದಲದ ನಡುವೆ ಮುಸ್ಲೀಮರಿಗೆ ಕಾಮಗಾರಿಯಲ್ಲಿ ಶೇಕಡ 4ರಷ್ಟು ಮೀಸಲಾತಿ ನೀಡುವ ಬಿಲ್ ಪಾಸ್ ಮಾಡಿದರು ಎಂದು ಆರೋಪಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮಾತನಾಡಿ, ಎಸ್ಸಿ, ಎಸ್ಟಿಗೆ ಮೀಸಲಿಟ್ಟಿರುವ ಹಣವನ್ನು ಅದೇ ಸಮುದಾಯಗಳ ಅಭಿವೃದ್ಧಿಗೆ ಬಳಸಬೇಕು, ಧರ್ಮ ಆಧಾರಿತವಾಗಿ ಮುಸ್ಲೀಂ ಸಮುದಾಯಕ್ಕೆ ನೀಡಿರುವ ಮೀಸಲಾತಿಯನ್ನು ರದ್ದುಪಡಿಸಬೇಕು. ವಿಧಾನ ಮಂಡಲ ಅಧಿವೇಶನದ ಸಮಯದಲ್ಲಿ ಸರ್ಕಾರದ ಜನವಿರೋಧಿ ನೀತಿ ಖಂಡಿಸಿದ ಬಿಜೆಪಿಯ 18 ಶಾಸಕರನ್ನು ಅಮಾನತುಗೊಳಿಸಿರುವುದು ಖಂಡನೀಯ. ಅಮಾನತನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಬ್ಯಾಟರಂಗೇಗೌಡ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ 4 ಲಕ್ಷ ಕೋಟಿ ರೂ. ಬಜೆಟ್‌ನಲ್ಲಿ 4 ಸಾವಿರ ಕೋಟಿ ರೂ. ಅನುದಾನವನ್ನು ಮುಸ್ಲೀಮರಿಗೆ ಮೀಸಲಿಟ್ಟಿದ್ದಾರೆ. ತಾವು ಸಂವಿಧಾನದ ರಕ್ಷಕರು ಎಂದು ಕೊಚ್ಚಿಕೊಳ್ಳುವ ಕಾಂಗ್ರೆಸ್‌ನವರು ಸಂವಿಧಾನದ ಯಾವ ಪುಟದಲ್ಲಿ ಧರ್ಮದ ಆಧಾರದಲ್ಲಿ ಮೀಸಲಾತಿ ನೀಡಬೇಕು ಎಂದಿದೆ ಹೇಳಲಿ. ಸಂವಿಧಾನ ಬಾಹಿರವಾಗಿ ಮುಸ್ಲೀಮರಿಗೆ ಕಾಮಗಾರಿ ಗುತ್ತಿಗೆಯಲ್ಲಿ ಶೇಕಡ 4ರಷ್ಟು ಮೀಸಲಾತಿ ನೀಡಿ ಅವರನ್ನ ಓಲೈಸಲು ಮುಂದಾಗಿದ್ದಾರೆ. ವಿಧಾನಸಭೆಯಲ್ಲಿ ಇದನ್ನು ವಿರೋಧಿಸಿದ ಬಿಜೆಪಿ ಶಾಸಕರನ್ನು ಸ್ಪೀಕರ್ ಅಮಾನತುಗೊಳಿಸಿ ದ್ವೇಷದ ರಾಜಕಾರಣ ಮಾಡಿದ್ದಾರೆ. ಸಭಾಧ್ಯಕ್ಷರು ಒಂದು ಧರ್ಮದ ಪ್ರತಿನಿಧಿಯಂತೆ ನಡೆದುಕೊಂಡಿದ್ದಾರೆ ಎಂದು ಟೀಕೆ ಮಾಡಿದರು.

ರಾಜ್ಯ ರೈತ ಮೋರ್ಚಾ ಮಾಜಿ ಪ್ರಧಾನ ಕಾರ್ಯದರ್ಶಿ ಎಸ್.ಶಿವಪ್ರಸಾದ್, ರಾಜ್ಯ ವಕ್ತಾರ ಹೆಚ್.ಎನ್.ಚಂದ್ರಶೇಖರ್, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಹೆಚ್.ಎ. ಆಂಜನಪ್ಪ, ಮುಖಂಡ ದಿಲೀಪ್‌ಕುಮಾರ್ ಮೊದಲಾದವರು ಧರ್ಮ ಆಧಾರಿತ ಮೀಸಲಾತಿ ಕ್ರಮ ಖಂಡಿಸಿ ಮಾತನಾಡಿದರು.

ನಂತರ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಬಿಜೆಪಿಯ ವಿವಿಧ ಮೋರ್ಚಾಗಳ ಮುಖಂಡರಾದ ಹೆಚ್.ಎಂ.ರವೀಶಯ್ಯ, ಸಂದೀಪ್‌ಗೌಡ, ಟಿ.ಹೆಚ್.ಹನುಮಂತರಾಜು, ನವಚೇತನ್, ಧನುಷ್, ಮಲ್ಲಿಕಾರ್ಜುನ್, ಸಿ.ಎನ್.ರಮೇಶ್, ವಿಷ್ಣುವರ್ಧನ್, ಪುಟ್ಟರಾಜು, ಇಂದ್ರಕುಮಾರ್, ಟಿ.ಆರ್.ಸದಾಶಿವಯ್ಯ, ಸತ್ಯಮಂಗಲ ಜಗದೀಶ್, ಬೆಳ್ಳಿ ಲೋಕೇಶ್, ಗೂಳೂರು ಶಿವಕುಮಾರ್, ಸಾಗರನಹಳ್ಳಿ ವಿಜಯಕುಮಾರ್, ಜ್ಯೋತಿ ತಿಪ್ಪೇಸ್ವಾಮಿ, ಲತಾಬಾಬು, ವೆಂಕಟೇಶಾಚಾರ್, ನಂದಿನಾಥ್ ಮೊದಲಾದವರು ಭಾಗವಹಿಸಿದ್ದರು.

## ವಿಶ್ವ ಕ್ಷಯರೋಗ ದಿನ: ನಗರದಲ್ಲಿ ಜನಜಾಗೃತಿ ಜಾಥಾ



ತುಮಕೂರು: ವಿಶ್ವ ಕ್ಷಯರೋಗ ದಿನದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಐಎಂಎ ಹಾಗೂ ಶ್ರೀದೇವಿ ಮೆಡಿಕಲ್ ಕಾಲೇಜು ಸಂಯುಕ್ತಾಶ್ರಯದಲ್ಲಿ ಕ್ಷಯ ರೋಗ ನಿರ್ಮೂಲನೆಗಾಗಿ ಜನಜಾಗೃತಿ ಜಾಥಾವನ್ನು ನಗರದಲ್ಲಿ ನಡೆಸಲಾಯಿತು.

ಹೌದು..! ನಾವು ಕ್ಷಯ ರೋಗವನ್ನು ಕೊನೆಗೊಳಿಸಬಹುದು ಎಂಬ ಘೋಷವಾಕ್ಯದೊಂದಿಗೆ ಕ್ಷಯ ರೋಗ ನಿರ್ಮೂಲನೆಗಾಗಿ ಜನರಲ್ಲಿ ಜಾಗೃತಿ ಮೂಡಿಸಲು ನಗರದ ಜಿಲ್ಲಾಸ್ಪತ್ರೆ ಆವರಣದಿಂದ ಹಮ್ಮಿಕೊಂಡಿದ್ದ ಜಾಥಾಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಬಿ.ಎಂ., ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅಜ್ಗರ್ ಬೇಗ್ ಹಾಗೂ ಐಎಂಎ ಅಧ್ಯಕ್ಷ ಡಾ. ಭೂಷಣ್ ಕೆ.ಪಿ.ಎಸ್. ಅವರು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಡಿಹೆಚ್‌ಓ ಡಾ. ಚಂದ್ರಶೇಖರ್ ಬಿ.ಎಂ. ಮಾತನಾಡಿ, ಕ್ಷಯ ರೋಗವನ್ನು ಹತೋಟಿಗೆ ತರಲು ಆರೋಗ್ಯ ಇಲಾಖೆ ಮತ್ತು ಸಿಬ್ಬಂದಿಗಳು ಶ್ರಮ ವಹಿಸಿ ಕೆಲಸ ಮಾಡುತ್ತಿದ್ದೇವೆ ಎಂದರು.

ದೇಶದಲ್ಲಿ ಶೇ. 20 ರಷ್ಟು ಮಂದಿ ಕ್ಷಯ ರೋಗಿಗಳಾಗುತ್ತಿದ್ದಾರೆ. ಪ್ರತಿದಿನ 570 ಜನ ಕ್ಷಯರೋಗದಿಂದ ಸಾವನ್ನಪ್ಪುತ್ತಿದ್ದಾರೆ. ಹಾಗಾಗಿ ಈ ರೋಗ ತಡೆಗೆ ಐಎಂಎ, ಆಸ್ಪತ್ರೆಗಳು, ವೈದ್ಯರು, ಆರೋಗ್ಯ ಕಾರ್ಯಕರ್ತರು ಶ್ರಮಿಸುತ್ತಿದ್ದಾರೆ. ಈ ರೋಗಕ್ಕೆ ತುತ್ತಾದವರಿಗೆ ಆದಷ್ಟು ಬೇಗ ಔಷಧಿ ನೀಡಿ ಗುಣಮುಖರನ್ನಾಗಿಸುವ ಕೆಲಸ ಮಾಡಬೇಕಿದೆ ಎಂದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಮೋಹನ್‌ದಾಸ್ ಆರ್.ಬಿ. ಮಾತನಾಡಿ, ಕ್ಷಯ ರೋಗ ಹೊಸ ಕಾಯಿಲೆಯಲ್ಲ. ಸುಮಾರು ವರ್ಷಗಳಿಂದ ಇರುವ ಹಳೇ ರೋಗ. ಇದಕ್ಕೆ ನಿರ್ಧಿಷ್ಟವಾದ ಚಿಕಿತ್ಸೆ ಇದ್ದರೂ ಸಹ ಇದರಿಂದ ಆಗುವ ಸಾವು–ನೋವನ್ನು ತಡೆಗಟ್ಟುವಲ್ಲಿ ನಾವು ಹಿಂದೆ ಬಿದ್ದಿದ್ದೇವೆ. ಇದಕ್ಕೆ ಜನಸಾಮಾನ್ಯರಲ್ಲಿ ಇರುವ ನಿರ್ಲಕ್ಷ್ಯವೇ ಕಾರಣ ಎಂದರು.

ಈ ಕ್ಷಯ ರೋಗ ಬಂದವರು ನಿರ್ಲಕ್ಷ್ಯ ಮಾಡದೆ ಸಮಯಕ್ಕೆ ಸರಿಯಾಗಿ ಹತ್ತಿರದ ಸರ್ಕಾರಿ ಆಸ್ಪತ್ರೆಗಳಿಗೆ ಹೋಗಿ ಪರೀಕ್ಷೆ ಮಾಡಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆದರು ಗುಣಮುಖರಾಗಿ ಈ ರೋಗವನ್ನು ತಡೆಗಟ್ಟಬಹುದು ಎಂದು ಅವರು ಹೇಳಿದರು.

ನಗರದ ಜಿಲ್ಲಾ ಆಸ್ಪತ್ರೆ ಆವರಣದಿಂದ ಆರಂಭವಾದ ಕ್ಷಯ ರೋಗದ ಅರಿವು ಮೂಡಿಸುವ ಜಾಥಾವು ಅಶೋಕ ರಸ್ತೆ, ಜಿಲ್ಲಾಧಿಕಾರಿಗಳ ಕಚೇರಿ ಮುಖೇನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ತಲುಪಿತು.

ಜಾಥಾದಲ್ಲಿ ಡಿಹೆಚ್‌ಓ ಡಾ. ಚಂದ್ರಶೇಖರ್ ಬಿ.ಎಂ., ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅಜ್ಗರ್ ಬೇಗ್, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಮೋಹನ್‌ದಾಸ್ ಆರ್.ಬಿ., ಐಎಂಎ ಅಧ್ಯಕ್ಷ ಡಾ. ಭೂಷಣ್ ಕೆ.ಪಿ.ಎಸ್., ಪ್ರಧಾನ ಕಾರ್ಯದರ್ಶಿ ಡಾ. ಪ್ರದೀಪ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಲಕ್ಷ್ಮೀಕಾಂತ್, ಗುಬ್ಬಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿಂದುಮಾಧವ್, ಜಿಲ್ಲಾಸ್ಪತ್ರೆಯ ಮಕ್ಕಳ ತಜ್ಞರಾದ ಡಾ. ಲಕ್ಷ್ಮೀಕಾಂತ್, ಆರ್‌ಸಿಹೆಚ್ ಅಧಿಕಾರಿ ಡಾ. ಮೋಹನ್, ಸೂರ್ಯ ಆಸ್ಪತ್ರೆಯ ಡಾ. ಲಕ್ಷ್ಮೀಕಾಂತ್ ಸೇರಿದಂತೆ ನರ್ಸಿಂಗ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಪಾಲ್ಗೊಂಡಿದ್ದರು.

### ಅಹಲ್ಯಾಬಾಯಿ ಹೋಳ್ಕರ್ ಕುರಿತ ವಿಶೇಷ ಉಪನ್ಯಾಸ; ಲೇಖಕ, ವಿದ್ವಾಂಸ ಆಶುತೋಷ್ ಅದೋನಿ

## ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಬಲೀಕರಣದ ಮಾದರಿ



ತುಮಕೂರು: ಹದಿನೆಂಟನೆಯ ಶತಮಾನದಲ್ಲೇ ಕಲ್ಯಾಣರಾಜ್ಯದ ಪರಿಕಲ್ಪನೆಯನ್ನು ನನಸಾಗಿಸಿದ ದಿಟ್ಟ ಆಡಳಿತಗಾರ್ತಿ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಬಲೀಕರಣದ ಅತ್ಯುತ್ತಮ ಮಾದರಿ ಎಂದು ಲೇಖಕ, ವಿದ್ವಾಂಸ ಆಶುತೋಷ್ ಅದೋನಿ ಅಭಿಪ್ರಾಯಪಟ್ಟರು.

ತುಮಕೂರು ವಿಶ್ವವಿದ್ಯಾನಿಲಯದ ಇತಿಹಾಸ ಮತ್ತು ಪುರಾತತ್ವಶಾಸ್ತ್ರ, ರಾಜ್ಯಶಾಸ್ತ್ರ, ಸಾರ್ವಜನಿಕ ಆಡಳಿತ, ಕನ್ನಡ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗಗಳು ಜಂಟಿಯಾಗಿ ಸೋಮವಾರ ಆಯೋಜಿಸಿದ್ದ 'ಅಹಲ್ಯಾಬಾಯಿ ಹೋಳ್ಕರ್ ಅವರ ಜೀವನ ಮತ್ತು ಸಾಧನೆಗಳು' ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಹಲ್ಯಾಬಾಯಿ ಕಾಲದಲ್ಲಿ ಮಾಳ್ವ ಪ್ರದೇಶವು ಭಾರತದ ಅತ್ಯಂತ ಶ್ರೀಮಂತ ರಾಜ್ಯವೆಂದು ಗುರುತಿಸಿಕೊಂಡಿತ್ತು. ತನ್ನ ಪತಿ ಹಾಗೂ ಮಗನನ್ನು ಅಕಾಲದಲ್ಲಿ ಕಳೆದುಕೊಂಡ ಆಕೆ ಅನೇಕ ತೊಂದರೆಗಳನ್ನು ಮೆಟ್ಟಿನಿಂತು ದಕ್ಷ ಆಡಳಿತ ನೀಡಿದಳು. ಏಕಾಂಗಿ ಹೋರಾಟ ಮಾಡಿ ಸುಖೀರಾಜ್ಯವನ್ನು ಸ್ಥಾಪಿಸಿದಳು ಎಂದು ವಿವರಿಸಿದರು.

ಅಹಲ್ಯಾಬಾಯಿಯ ಮಾವ ಮಲ್ಹಾರ ರಾವ್ ಆಕೆಯನ್ನು ಗಂಡುಮಕ್ಕಳಿಗೆ ಸರಿಸಮನಾಗಿ ಬೆಳೆಸಿ ರಾಜಕಾರ್ಯಗಳ ಅನುಭವ ನೀಡಿದರು. ಯುದ್ಧವಿದ್ಯೆ, ವಾಕ್‌ಚಾತುರ್ಯ, ದೂರದೃಷ್ಟಿ ಎಲ್ಲವನ್ನೂ ಕರಗತ ಮಾಡಿಕೊಳ್ಳುವಂತೆ ಪ್ರೇರಣೆ ನೀಡಿದರು. ಮಹಿಳಾ ಸಬಲೀಕರಣದ ಬಗ್ಗೆ ನಾವು ಈಗ ಮಾತಾಡುತ್ತಿದ್ದೇವೆ. ಇದನ್ನು ಮುನ್ನೂರು ವರ್ಷಗಳ ಹಿಂದೆಯೇ ಭಾರತದ ಪ್ರಾಂತ್ಯವೊಂದು ಮಾಡಿತೋರಿಸಿತ್ತು ಎಂದು ವಿಶ್ಲೇಷಿಸಿದರು.

ಸಚ್ಚಾರಿತ್ರ್ಯವಿಲ್ಲದೆ ಯಾವುದೇ ರಾಷ್ಟ್ರ ಎದ್ದುನಿಲ್ಲದು. ಯಾರೇ ಆಡಳಿತಗಾರರು ಶ್ರೇಷ್ಠರು ಎನಿಸಿಕೊಳ್ಳಲಾರರು. ಆದರೆ ಅಹಲ್ಯಾಬಾಯಿ ನೈತಿಕವಾಗಿ ಅದ್ಭುತ ವ್ಯಕ್ತಿತ್ವ ಬೆಳೆಸಿಕೊಂಡಿದ್ದರು. ಅವರ ವೈಯಕ್ತಿಕ ಬದುಕು ಪಾರದರ್ಶಕವಾಗಿತ್ತು. ಚಾರಿತ್ರ್ಯಕ್ಕೂ ರಾಜಕೀಯಕ್ಕೂ ಸಂಬಂಧವಿದೆ ಎಂಬುದನ್ನು ಆಕೆ ತೋರಿಸಿಕೊಟ್ಟರು ಎಂದರು.

ಅಹಲ್ಯಾಬಾಯಿಗೆ ಸಾಮಾಜಿಕ ಜವಾಬ್ದಾರಿಯ ಸ್ಪಷ್ಟ ಕಲ್ಪನೆಯಿತ್ತು. ನೀರಿನ ರಕ್ಷಣೆ, ಪ್ರಕೃತಿಯ ಪರಿಪಾಲನೆ, ಪರಿಸರ ಸಂರಕ್ಷಣೆ, ಉದ್ಯೋಗ ವೃದ್ಧಿ ಮುಂತಾದ ಆಧುನಿಕ ಅಗತ್ಯಗಳನ್ನು ಆಕೆ ಮನಗಂಡಿದ್ದಳು. ಇಂದಿನ ಯುವ ಜನತೆ ಅವರನ್ನು ಪ್ರೇರಣೆಯಾಗಿ ತೆಗೆದುಕೊಳ್ಳಬೇಕು. ಎಂತಹ ಸಮಸ್ಯೆಗಳು ಇದ್ದರೂ ಸಹ ಖಿನ್ನತೆಗೆ ಒಳಪಡದೆ ಧೈರ್ಯವಾಗಿ ಜೀವನವನ್ನು ಸಾಗಿಸಬೇಕು ಎಂಬುದನ್ನು ಅಹಲ್ಯಾಬಾಯಿಯ ಬದುಕನ್ನು ನೋಡಿ ಕಲಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪರೀಕ್ಷಾಂಗ ಕುಲಸಚಿವ ಪ್ರೊ. ಪ್ರಸನ್ನಕುಮಾರ್ ಕೆ. ಮಾತನಾಡಿ, ಕಟ್ಟುಪಾಡುಗಳ ಮಧ್ಯೆಯೂ ಮನಸ್ಸು ಮಾಡಿದರೆ ಮಹಿಳೆ ಏನನ್ನು ಬೇಕಾದರೂ ಸಾಧಿಸಬಹುದು ಎಂಬುದಕ್ಕೆ ಹೋಳ್ಕರ್ ಉತ್ತಮ ಮಾದರಿಯಾಗಿ ನಿಲ್ಲುತ್ತಾರೆ ಎಂದು ಅಭಿಪ್ರಾಯಪಟ್ಟರು.

ಮುನ್ನೂರು ವರ್ಷಗಳ ಹಿಂದೆ ಭಾರತದ ಪರಿಸ್ಥಿತಿ ಹೇಗಿತ್ತೆಂದು ಊಹಿಸಬಹುದು. ಅಷ್ಟು ಅಡೆತಡೆಗಳ ನಡುವೆ ಆಕೆ ಹೊಂದಿದ್ದ ಕಲ್ಯಾಣರಾಜ್ಯದ ಕಲ್ಪನೆ ಶ್ರೇಷ್ಠವಾದದ್ದು. ಅಹಲ್ಯಾಬಾಯಿ ಬಗ್ಗೆ ಹೆಚ್ಚಿನ ಓದು, ಅಧ್ಯಯನ, ಸಂಶೋಧನೆ ನಡೆಯಬೇಕು ಎಂದರು.

ಸಿಂಡಿಕೇಟ್ ಸದಸ್ಯ ಡಾ. ಕೆ. ರಾಜೀವಲೋಚನ ಪ್ರಾಸ್ತಾವಿಕವಾಗಿ ಮಾತನಾಡಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಡಾ. ಸಿಬಂತಿ ಪದ್ಮನಾಭ ಕೆ. ವಿ. ಸ್ವಾಗತಿಸಿದರು. ಡಾ. ಜಿ. ಗಿರಿಜಮ್ಮ ವಂದಿಸಿದರು. ಅಖಿಲಾಂಡೇಶ್ವರಿ ನಿರೂಪಿಸಿದರು. ಬೆಂಗಳೂರಿನ ಕಲಾಸಂಪದ ಸಂಸ್ಥೆಯ ವಿದುಷಿ ವೀಣಾ ಸಿ. ಶೇಷಾದ್ರಿಯವರ ತಂಡವು 'ಚಿನ್ಮಾತೆ ಅಹಲ್ಯಾ– ತ್ರಿಶತಿ ಅತುಲ್ಯ' ಎಂಬ ನೃತ್ಯರೂಪಕವನ್ನು ಪ್ರಸ್ತುತಪಡಿಸಿತು.

## ಮುಕ್ತ ವಿವಿ : ಜನವರಿ ಆವೃತ್ತಿ ಪ್ರವೇಶಾತಿಗೆ ಮಾ. 31 ಕಡೆಯ ದಿನ

ತುಮಕೂರು: ಮೈಸೂರು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಕೆಎಸ್‌ಓಯು)ವು 2024-25ನೇ ಶೈಕ್ಷಣಿಕ ಸಾಲಿನ ಜನವರಿ ಆವೃತ್ತಿ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಮಾರ್ಚ್ 31 ಕಡೆಯ ದಿನವಾಗಿದೆ.

ತುಮಕೂರಿನ ಕೆಎಸ್‌ಓಯು ಪ್ರಾದೇಶಿಕ ಕೇಂದ್ರದಲ್ಲಿ ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಾದ ಬಿ.ಎ., ಬಿ.ಕಾಂ., ಬಿ.ಬಿ.ಎ., ಬಿ.ಸಿ.ಎ., ಬಿ.ಎಲ್.ಐ.ಎಸ್ಸಿ., ಬಿ.ಎಸ್.ಡಬ್ಲ್ಯ್ಯ., ಬಿ.ಎಸ್ಸಿ ಎಂ.ಎ., ಎಂ.ಸಿ.ಜೆ., ಎಂ.ಕಾಂ., ಎಂ.ಸಿ.ಎ., ಎಂ.ಎಸ್.ಡಬ್ಲ್ಯ್ಯ., ಎಂ.ಎಲ್.ಐ.ಎಸ್ಸಿ., ಎಂ.ಎಸ್ಸಿ. ಎಂ.ಬಿ.ಎ., ಪಿ.ಜಿ. ಸರ್ಟಿಫಿಕೇಟ್, ಡಿಪ್ಲೋಮಾ, ಸರ್ಟಿಫಿಕೇಟ್ ಪ್ರೋಗ್ರಾಮ್ಸ್‌ಗಳಿಗೆ ಪ್ರವೇಶ ಪಡೆಯಲು ಪದವಿ ಪೂರ್ವ(10+2) ಹಾಗೂ ಸ್ನಾತಕ ಪದವಿ(10+2+3) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಪ್ರಥಮ ವರ್ಷದ ಪ್ರವೇಶಾತಿಗಾಗಿ ಬಿ.ಎ. ತರಗತಿಗೆ 8400 ರೂ., ಬಿ.ಕಾಂ.-8900 ರೂ., ಬಿ.ಸಿ.ಎ/ಬಿ.ಎಸ್ಸಿ.-23900 ರೂ., ಬಿ.ಬಿ.ಎ./ಬಿ.ಎಲ್.ಐ.ಎಸ್ಸಿ/ಎಂ.ಕಾಂ.-12400 ರೂ., ಬಿ.ಎಸ್.ಡಬ್ಲ್ಯೂ.-12900 ರೂ., ಎಂ.ಎ.-10600 ರೂ., ಎಂ.ಸಿ.ಜೆ.-16200,. ಎಂ.ಬಿ.ಎ.-29900, ಎಂ.ಎಸ್ಸಿ./ಎಂ.ಸಿ.ಎ.-29700, ಎಂ.ಎಸ್.ಡಬ್ಲ್ಯೂ.-21300, ಎಂ.ಎಲ್.ಐ.ಎಸ್ಸಿ.-18150 ರೂ.ಗಳ ಶುಲ್ಕವನ್ನು ನಿಗಧಿಪಡಿಸಲಾಗಿದೆ.

ಹೆಚ್ಚಿನ ವಿವರಗಳಿಗಾಗಿ ಪ್ರಾದೇಶಿಕ ನಿರ್ದೇಶಕರು, ಕರಾಮುವಿ ಪ್ರಾದೇಶಿಕ ಕೇಂದ್ರ ತುಮಕೂರು, ಟೂಡಾ ಲೇಔಟ್, ರಾಜೀವ್‌ಗಾಂಧಿ ನಗರ, ಗಂಗಸಂದ್ರ ಮುಖ್ಯರಸ್ತೆ, ಮೆಳೆಕೋಟೆ, ತುಮಕೂರು-572105 ಅಥವಾ ದೂರವಾಣಿ ಸಂಖ್ಯೆ- 0816-2955580, ಮೊ.ಸಂ. 9844506629/ 9886112434/ 7349474339ನ್ನು ಸಂಪರ್ಕಿಸಬಹುದೆಂದು ಪ್ರಾದೇಶಿಕ ನಿರ್ದೇಶಕ ಡಾ: ಲೋಕೇಶ. ಆರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 5, 8ನೇ ತರಗತಿ ಪ್ರವೇಶ : ಏ.6ರಂದು ಪರೀಕ್ಷೆ

ತುಮಕೂರು: ಬೆಂಗಳೂರು ನಗರ ಜಿಲ್ಲೆ ಮಾಗಡಿ ರಸ್ತೆಯಲ್ಲಿರುವ ಜನಸೇವಾ ವಿದ್ಯಾ ಕೇಂದ್ರದಲ್ಲಿ 2025-26ನೇ ಸಾಲಿಗಾಗಿ 5ನೇ ತರಗತಿ ಕನ್ನಡ ಮಾಧ್ಯಮ ಹಾಗೂ 8ನೇ ತರಗತಿ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮದಲ್ಲಿ ವ್ಯಾಸಂಗ ಮಾಡಲಿಚ್ಛಿಸುವ ಪ.ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲು ಏಪ್ರಿಲ್ 6ರಂದು ಪರೀಕ್ಷೆ ನಡೆಯಲಿದೆ.

ಆಸಕ್ತ ಪೋಷಕರು ತಮ್ಮ ಮಕ್ಕಳನ್ನು ದಾಖಲಿಸಲು ಇಚ್ಛಿಸಿದಲ್ಲಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತುಮಕೂರು ಇವರನ್ನು ಮಾರ್ಚ್ 29ರೊಳಗಾಗಿ ಸಂಪರ್ಕಿಸಿ ವಿದ್ಯಾರ್ಥಿಗಳ ಮಾಹಿತಿಯನ್ನು ಒದಗಿಸಬೇಕು.



ತುಮಕೂರಿನ ಕ್ಯಾತ್ಸಂದ್ರದಲ್ಲಿರುವ ಸಹಕಾರಿ ಸಚಿವ ಕೆ.ಎನ್ ರಾಜಣ್ಣ ಸ್ವಗೃಹದಲ್ಲಿ ಆರ್‌ಆರ್ ಅಭಿಮಾನಿ ಬಳಗದಿಂದ ವಿ.ಪ ಸದಸ್ಯ ಆರ್ ರಾಜೇಂದ್ರ ರಾಜಣ್ಣನವರ 43 ನೇ ಹುಟ್ಟು ಹಬ್ಬವನ್ನು ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಭೀಮರಾಜು, ಪ್ರತಾಪ್, ರಾಜಗೋಪಾಲ್, ಲೋಕೇಶ್, ಪವನ್ ಗೌತಮ್ ಮೋಹನ್ ಮಂಜುನಾಥ್ ಮಾರುತಿ ಹಾಜರಿದ್ದರು.

## ಕೊಲೆ ಆರೋಪಿಗಳಿಗೆ ಜೀವಾವಧಿ ಶಿಕ್ಷೆ

ತುಮಕೂರು: ಜಿಲ್ಲೆಯ ಬಡವನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಮಹಿಳೆಯೊಬ್ಬರ ಕೊಲೆಗೈದು ಬಂಗಾರದ ಒಡವೆಗಳನ್ನು ಅಪಹರಿಸಿದ್ದ ಇಬ್ಬರು ಆರೋಪಿಗಳಿಗೆ ಇಲ್ಲಿನ 4ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಯಾದವ ಕರಕೇರ ರವರು ಜೀವಾವಧಿ ಶಿಕ್ಷೆ ಮತ್ತು ತಲಾ 60 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

ಆರೋಪಿಗಳಾದ ಶಿವಕುಮಾರ್ @ ಶಿವ (42 ವರ್ಷ), ಮಂಜುನಾಥ @ ಮೆಂಟಲ್ ಮಂಜ (44) ಎಂಬುವವರೇ ಜೀವಾವಧಿ ಶಿಕ್ಷೆಗೆ ಒಳಗಾಗಿರುವವರು. ಕಾರೊಂದರಲ್ಲಿ ದಿನಾಂಕ 6-6-2019ರಂದು ಗಿರಿಜಮ್ಮ ಎಂಬಾಕೆಯನ್ನು ಕರೆದೊಯ್ದು, ಮಾಯಗೊಂಡನಹಳ್ಳಿ ಕ್ರಾಸ್ ಬಳಿಯ ರಸ್ತೆ ಬದಿಯಲ್ಲಿ ಗಿರಿಜಮ್ಮನಿಗೆ ಹಗ್ಗವನ್ನು ಬಿಗಿದು ಕೊಲೆಗೈದಿದ್ದರು. ನಂತರ ಸಾಕ್ಷ್ಯ ನಾಶಪಡಿಸಲು ಡೀಸೆಲ್ ಸುರಿದು ಸುಟ್ಟು ಹಾಕಿ ಮೃತಳ ಮೊಬೈಲ್ ಮತ್ತು ಸಿಮ್, 183500 ಬೆಲೆಯ ಆಭರಣ ದೋಚಿ ಪರಾರಿಯಾಗಿದ್ದರು. ಬಡವನಹಳ್ಳಿ ಪೊಲೀಸರು ಆರೋಪಿಗಳನ್ನು ಬಂಧಿಸಿದ್ದರು. ಅಂದಿನ ತನಿಖಾಧಿಕಾರಿ ಪ್ರಭಾಕರ್ ಕೆ. ರವರು ದೋಷಾರೋಪಣಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಎರಡೂ ಕಡೆ ವಾದ ವಿವಾದ ಆಲಿಸಿದ ನ್ಯಾಯಾಧೀಶರು ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿಗಳಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿ ತೀರ್ಪಿತ್ತಿದ್ದಾರೆ.

ಪ್ರಕರಣದಲ್ಲಿ ಅಭಿಯೋಜನೆ ಪರವಾಗಿ ಸರ್ಕಾರಿ ಅಭಿಯೋಜಕ ಬಿ.ಎಂ. ನಿರಂಜನಮೂರ್ತಿ ವಾದ ಮಂಡಿಸಿದ್ದರು.

## 'ತತ್ವಪದ ಗಾಯನ ಸಮ್ಮೇಳನ'

ತುಮಕೂರು: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತುಮಕೂರು. ಕರ್ನಾಟಕ ರಾಜ್ಯ ಜಾನಪದ ಸಂಗೀತ ಮತ್ತು ಯಕ್ಷಗಾನ

ಬಯಲಾಟ ಕಲಾವಿದರ ಸಂಘ, ತುಮಕೂರು. ಇವರ ಸಂಯುಕ್ತಾಶ್ರಯದಲ್ಲಿ ತುಮಕೂರು ನಗರದ ಕನ್ನಡ ಭವನದಲ್ಲಿ ದಿನಾಂಕ : 26-03-2025 ಬುಧವಾರ ಬೆಳಿಗ್ಗೆ 10.30 ಗಂಟೆಗೆ "ತತ್ವಪದ ಗಾಯನ ಸಮ್ಮೇಳನ"ವನ್ನು ಹಮ್ಮಿಕೊಳ್ಳಲಾಗಿದೆ.

ತುಮಕೂರಿನ ಸಂಸ್ಕೃತಿ ಚಿಂತಕರಾದ ಡಾ. ನಟರಾಜ್ ಬೂದಾಳು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಕೆ.ಎಸ್.ಸಿದ್ದಲಿಂಗಪ್ಪ ಅಧ್ಯಕ್ಷತೆ ವಹಿಸುವರು.

ತುಮಕೂರಿನ ಸಂಸ್ಕೃತಿ ಚಿಂತಕರಾದ ಡಾ. ಜಿ.ವಿ.ಆನಂದಮೂರ್ತಿ ವಿಶೇಷ ಉಪನ್ಯಾಸ ನೀಡುವರು. ನಿವೃತ್ತ ಪ್ರಾಚಾರ್ಯರು ಹಾಗೂ ಸಾಹಿತಿಗಳಾದ ಮರಿಬಸಪ್ಪ ಮುಖ್ಯ ಅತಿಥಿಗಳಾಗಿರುವರು.

ಮಧ್ಯಾಹ್ನ ಸಮಾರೋಪ ಸಮಾರಂಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಖ್ಖಾಧಿಕಾರಿಗಳಾದ ಕೆ.ಸಿ.ನರಸಿಂಹಮೂರ್ತಿ ಸಮ್ಮೇಳನದಲ್ಲಿ ಭಾಗವಹಿಸಿದ ಎಲ್ಲ ಕಲಾವಿದರಿಗೆ ಪ್ರಶಸ್ತಿ ಪತ್ರ ವಿತರಣೆ ಮಾಡುವರು. ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಕಲಾಶ್ರೀ ಡಾ. ಲಕ್ಷ್ಮಣದಾಸ್ ಹಾಗೂ ಜಿಲ್ಲಾ ಮಹಿಳಾ ಕದಳಿ ವೇದಿಕೆ ಅಧ್ಯಕ್ಷರಾದ ನಾಗರತ್ನ ಚಂದ್ರಪ್ಪ ಮುಖ್ಯ ಅತಿಥಿಗಳಾಗಿರುವರು. ತುಮಕೂರು ಜಿಲ್ಲೆ ಎಲ್ಲ ತತ್ವಪದ ಗಾಯನ ಕಲಾವಿದರು ಸಮ್ಮೇಳನದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಕೋರಿದೆ.

## ಹೊನ್ನಮರಡಿ ಶ್ರೀ ರಂಗನಾಥಸ್ವಾಮಿ ಬ್ರಹ್ಮ ರಥೋತ್ಸವ

ಚಿ.ನಾ.ಹಳ್ಳಿ : ತಾಲೂಕಿನ ಹಂದನಕೆರೆ ಹೋಬಳಿಯ ಬೆಳಗುಲಿ ಹೊನ್ನಮರಡಿ ಶ್ರೀ ರಂಗನಾಥಸ್ವಾಮಿ ಜಾತ್ರಾ ಮಹೋತ್ಸವ ಏ 6 ರಿಂದ 15ರವರೆಗೆ ನಡೆಯಲಿದೆ.

ಏ. 6 ರಂದು ಧ್ವಜಾರೋಹಣ, ಹೊನ್ನಮರಡಿ ಬೆಟ್ಟದಲ್ಲಿ ಕಳಸ ಸ್ಥಾಪನೆ, 7 ರಂದು ಹೊನ್ನಮರಡಿ ಬೆಟ್ಟದಲ್ಲಿ ಅನ್ನ ದಾಸೋಹ, ಹನುಮಂತೋತ್ಸವ, 8 ರಂದು ಗರುಡೋತ್ಸವ, 9 ರಂದು ಸರ್ಪೋತ್ಸವ, 10 ರಂದು ಅಶ್ವರೋಹಣ, 11 ರಂದು ಧ್ವಜರೋಹಣೋತ್ಸವ, ನೊರೊಂದಡೆ ಸೇವೆ, 12 ರಂದು ಬೆಳಗುಲಿ ಗ್ರಾಮದಲ್ಲಿ ಬ್ರಹ್ಮರಥೋತ್ಸವ ನಡೆಯಲಿದೆ. ಅಂದು ರಾತ್ರಿ ಕುರುಕ್ಷೇತ್ರ ಪೌರಾಣಿಕ ನಾಟಕ ಪ್ರದರ್ಶನ , ರಸಮಂಜರಿ ಹಮ್ಮಿಕೊಳ್ಳಲಾಗಿದೆ. 13 ರಂದು ಆಳು ಪಲ್ಲಕ್ಕಿ ಉತ್ಸವ, 14 ರಂದು ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಕೊನೆಯ ದಿನವಾದ 15 ರಂದು ಗಂಗಸ್ನಾನ, ಅಗ್ನಿ ಕೊಂಡೋತ್ಸವ, ಅವಭೃತ ಸ್ನಾನ ನಡೆಯಲಿದೆ ಎಂದು ದೇವಾಲಯದ ಆಡಳಿತ ಮಂಡಳಿ ತಿಳಿಸಿದೆ.

## ಬೇಸಿಗೆ ಕ್ರಿಕೆಟ್ ಶಿಬಿರ ಆರಂಭ

ತುಮಕೂರು: ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ಮಾರ್ಚ್. 24ರಿಂದ 45 ದಿನಗಳ ಕಾಲ ತುಮಕೂರು ಆಕೇಷನಲ್ಸ್ ಮತ್ತು ತುಮಕೂರು ಕ್ರಿಕೆಟರ್ಸ್ ವತಿಯಿಂದ ಬೇಸಿಗೆ ಕ್ರಿಕೆಟ್ ಶಿಬಿರವನ್ನು ಆಯೋಜಿಸಲಾಗಿದೆ.

ಈ ಸಂಸ್ಥೆಗಳಲ್ಲಿ ಅಭ್ಯಾಸ ಮಾಡಿದ ಮಕ್ಕಳು ವಿವಿಧ ವಿಭಾಗಗಳಲ್ಲಿ ರಾಷ್ಟ್ರ ಮತ್ತು ರಾಜ್ಯಮಟ್ಟವನ್ನು ಪ್ರತಿನಿಧಿಸಿರುತ್ತಾರೆ ಎಂದು ಸುನಿಲ್ ಪಟೇಲ್ ತಿಳಿಸಿದ್ದಾರೆ. ನುರಿತ ತರಬೇತುದಾರರಿಂದ ತರಬೇತಿಯನ್ನು ನೀಡಲಾಗುತ್ತಿದ್ದು ಆಸಕ್ತಿಯುಳ್ಳ ತುಮಕೂರಿನ ಮಕ್ಕಳು ಈ ಸದಾವಕಾಶವನ್ನು ಸುದುಪಯೋಗ ಪಡಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗಾಗಿ ಸುನಿಲ್ ಪಟೇಲ್ 740 6989176 ಮತ್ತು 7026408454 ಸಂಪರ್ಕಿಸಬಹುದು.

## ಸರ್ಕಾರಕ್ಕೆ ಫೋಟೋ, ವಿಡಿಯೋಗ್ರಾಫರ್ಸ್ ಸಂಘದ ಮನವಿ

# 'ವೃತ್ತಿನಿರತ ಛಾಯಾಗ್ರಾಹರಿಗೆ ಅಗತ್ಯ ಸವಲತ್ತು ನೀಡಿ'

ತುಮಕೂರು: ಫೋಟೋಗ್ರಫಿ, ವಿಡಿಯೋಗ್ರಫಿ ಎಂಬುದು ವೃತ್ತಿಪರ ಕಲೆ. ಇಂತಹ ಫೋಟೊ, ವಿಡಿಯೋಗ್ರಾಫರ್‌ಗಳನ್ನು ಸರ್ಕಾರ ಅಸಂಘಟಿತ ಕಾರ್ಮಿಕರು ಎಂದು ಪರಿಗಣಿಸಿ ಕಾರ್ಮಿಕ ಇಲಾಖೆಯಿಂದ ದೊರೆಯುವ ಅಗತ್ಯ ಸವಲತ್ತು ನೀಡಬೇಕು ಎಂದು ಜಿಲ್ಲಾ ಫೋಟೋ ಮತ್ತು ವಿಡಿಯೋಗ್ರಾಫರ್ಸ್ ಸಂಘದ ಅಧ್ಯಕ್ಷ ಟಿ.ಹೆಚ್.ಅನಿಲ್‌ಕುಮಾರ್ ಸರ್ಕಾರವನ್ನು ಒತ್ತಾಯಿಸಿದರು.



ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದು ಫೋಟೋ, ವೀಡಿಯೋಗ್ರಾಫರ್‌ಗಳ ಬದುಕು ಭದ್ರತೆಯಿಲ್ಲದೆ ಸಂಕಷ್ಟದಲ್ಲಿದೆ, ಕೆಲಸವರು ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿಕೊಂಡು, ಕೆಲವರು ಸೀಮಿತ ಬಂಡವಾಳದಲ್ಲಿಯೇ ಛಾಯಾಗ್ರಹಣ ಮಾಡುತ್ತಾ ಬದುಕು ಕಟ್ಟಿಕೊಂಡಿದ್ದಾರೆ. ಆದರೆ ಇತ್ತೀಚಿನ ಇವೆಂಟ್ ಆರ್ಗನೈಜರ್ಸ್ ಹುಟ್ಟಿಕೊಂಡು ವೃತ್ತಿನಿರತ ಫೋಟೋ, ವಿಡಿಯೋಗ್ರಾಫರ್‌ಗಳ ಸ್ಪರ್ಧೆ ನೀಡಿ ನಮ್ಮ ವ್ಯವಹಾರ ಅತಂತ್ರವಾಗಿದೆ ಎಂದರು.

ಅಸಂಘಟಿತ ಕಾರ್ಮಿಕರಾದ ಫೋಟೋ, ವಿಡಿಯೋಗ್ರಾಫರ್‌ಗಳಿಗೆ ಇತರೆ ಅಸಂಘಟಿತ ವಲಯದವರಿಗೆ ನೀಡುವಂತೆ ಕಾರ್ಮಿಕ ಇಲಾಖೆಯಿಂದ ಟೂಲ್ ಕಿಟ್‌ಗಳನ್ನು ನೀಡಬೇಕು. 60 ವರ್ಷ ತುಂಬಿದ ನೋಂದಾಯಿತ ಫೋಟೋ, ವಿಡಿಯೋಗ್ರಾಫರ್‌ಗಳಿಗೆ ಮಾಸಾಶನ ಕೊಡಬೇಕು. ಚುನಾವಣೆ ಹಾಗೂ ಸರ್ಕಾರಿ ಕಾರ್ಯಕ್ರಮಗಳಲ್ಲಿ ಇಲಾಖೆ ಸಿಬ್ಬಂದಿಯೇ ಛಾಯಾಗ್ರಹಣ ವ್ಯವಹಾರ ಮಾಡುವುದನ್ನು ತಪ್ಪಿಸಿ ವೃತ್ತಿನಿರತರಿಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಕರ್ನಾಟಕ ಛಾಯಾಚಿತ್ರಗಾರರ ಸಂಘದ ಅಧ್ಯಕ್ಷ ನಾಗೇಶ್ ರಾವ್ ಮಾತನಾಡಿ, ರಾಜ್ಯದಲ್ಲಿ ಸುಮಾರು ಎರಡೂವರೆ ಲಕ್ಷ ಜನ ವೃತ್ತಿನಿರತ ಫೋಟೋ, ವಿಡಿಯೋಗ್ರಾಫರ್‌ಗಳಿದ್ದಾರೆ. ಇವೆಂಟ್ ಆರ್ಗನೈಸಜರ್ಸ್, ಮತ್ತಿತರ ಚಟುವಟಿಕೆಗಳಿಂದಾಗಿ ನಮ್ಮ ವೃತ್ತಿಗೆ ಹೊಡೆತ ಬಿದ್ದಿದೆ. ಈ ಪರಿಸ್ಥಿತಿಯಲ್ಲಿ ಸರ್ಕಾರ ನೆರವಿಗೆ ಬರಬೇಕು. ಅಸಂಘಟಿತ ಕಾರ್ಮಿಕ ವಲಯದ ಫೋಟೋ, ವಿಡಿಯೋಗ್ರಾಫರ್‌ಗಳು ಅಪಘಾತದಲ್ಲಿ ನಿಧನರಾದಾಗ ನೀಡುವ ಒಂದು ಲಕ್ಷ ರೂ. ಮೊತ್ತದ ಪರಿಹಾರ ಪ್ರಮಾಣ ಹೆಚ್ಚು ಮಾಡಬೇಕು. 60 ವರ್ಷ ಮೇಲ್ಪಟ್ಟವರಿಗೆ ಮಾಸಾಶನ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಈ ಸಂಬಂಧವಾಗಿ ತುಮಕೂರಿನಲ್ಲಿ ಪ್ರತಿಭಟನೆ ನಡೆಸಲು ಉದ್ದೇಶಿಸಲಾಗಿದೆ. ಅಲ್ಲದೆ ತುಮಕೂರಿನಲ್ಲಿ ಫೋಟೋ, ವಿಡಿಯೋಗ್ರಾಫರ್‌ಗಳ ರಾಜ್ಯಮಟ್ಟದ ಸಮಾವೇಶ ಏರ್ಪಡಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಫೋಟೋ ಮತ್ತು ವಿಡಿಯೋಗ್ರಾಫರ್‌ಗಳ ಸಂಘದ ಕಾರ್ಯಾಧ್ಯಕ್ಷ ಎನ್.ವೆಂಕಟೇಶ್ ಮಾತನಾಡಿದರು. ಸಂಘದ ಉಪಾಧ್ಯಕ್ಷ ಆರ್.ನವೀನ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಎನ್.ರಮೇಶ್, ಸಹ ಕಾರ್ಯದರ್ಶಿ ಟಿ.ಆರ್.ವಿನಯ್ ಕುಮಾರ್, ಖಜಾಂಚಿ ಚಂಗಾವರ ಸಿ.ಎನ್.ರವಿಕುಮಾರ್, ಪದಾಧಿಕಾರಿಗಳಾದ ಶಿವಶಂಕರ್, ರೇಣುಕಾಪ್ರಸಾದ್, ಸಿ.ಕೆ.ರಂಗನಾಥ್, ಜಯಣ್ಣ ಇತರರಿದ್ದರು.

# ಹೂ ಪುಷ್ಪಗಳ ಅಲಂಕಾರಿಕ ಜೋಡಣೆ, ಕಾರ್ಯಗಾರ

ತುಮಕೂರು: ಇಲ್ಲಿನ ಕೇಂದ್ರ ಗ್ರಂಥಾಲಯದ ಸಭಾಂಗಣದಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಇತರೆ ಪದವಿ ವಿದ್ಯಾರ್ಥಿಗಳಿಗೆ, ನಿರುದ್ಯೋಗಿಗಳಿಗೆ "ಹೂ ಪುಷ್ಪಗಳ ಅಲಂಕಾರಿಕ ಜೋಡಣೆ "ಒಂದು ದಿನದ ಕಾರ್ಯಗಾರವನ್ನು ಏರ್ಪಡಿಸಲಾಗಿತ್ತು.




ಜಿಲ್ಲಾಧಿಕಾರಿ ಶುಭಕಲ್ಯಾಣ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ತೋಟಗಾರಿಕೆ ಇಲಾಖೆಯಲ್ಲಿ ಕೆಲವು ದಿನಗಳ ಹಿಂದೆ ನಡೆದ ಫಲಪುಷ್ಪ ಪ್ರದರ್ಶನದಲ್ಲಿ ಶ್ರೀಮತಿ ವಿದ್ಯಾ ಯಾದವ್ ರವರು ಮಂದರಗಿರಿ ಬೆಟ್ಟ ಇನ್ನಿತರಪ್ರೇಕ್ಷಣೀಯ ಸ್ಥಳಗಳ ಕಲಾಕೃತಿಯನ್ನು ಜನ ಮೆಚ್ಚುಗೆ ಗಳಿಸುವಂತೆ ರಚಿಸಿದ್ದರು. ಇವರು ರಾಜ್ಯ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪುಷ್ಪಗಳ ಅಲಂಕಾರಿಕ ಜೋಡಣೆ ಕಲಾಕೃತಿಗಳನ್ನು ರಚಿಸಿ ಉತ್ತಮ ಹೆಸರು ಗಳಿಸಿದ್ದಾರೆ. ನಮ್ಮ ಜಿಲ್ಲೆಯ ವಿದ್ಯಾರ್ಥಿ ಗಳಿಗೆ ಹಾಗೂ ನಿರುದ್ಯೋಗಿ ಪದವಿಧರರಿಗೆ ಅನುಕೂಲವಾಗಲಿ ಎಂಬ ದೃಷಿಯಿಂದ ಹೂ-ಪುಷ್ಪಗಳ ಅಲಂಕಾರಿಕ ಜೋಡಣೆ ಒಂದು ದಿನದ ಕಾರ್ಯಗಾರವನ್ನು ನಾಲ್ಕೂ ಇಲಾಖೆಗಳ ವತಿಯಿಂದ ಏರ್ಪಡಿಸಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಿದವರೆಲ್ಲರೂ ಶ್ರದ್ಧೆಯಿಂದ ಕಲಾಕೃತಿ ಆಲಿಸಿ ಅವರ ಮಾತನ್ನು ಕೇಳಿ ಕಾರ್ಯಾಗಾರದ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಜಿಲ್ಲಾ ಪಂಚಾಯತ್ ಸಿಇಓ ಪ್ರಭು ಜಿ ಮಾತನಾಡಿ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಲ್ಲಿ ಶ್ರದ್ಧೆಯಿಂದ ಶಿಕ್ಷಕರು ಹೇಳಿಕೊಟ್ಟ ಪಾಠ ಕಲಿಯಿರಿ, ಪ್ರತಿನಿತ್ಯ ಬೇರೆಬೇರೆ ಉತ್ತಮ ಸಂಸ್ಕಾರವುಳ್ಳ ಪುಸ್ತಕ ಗಳನ್ನು ಓದುವ ಪರಿಪಾಠ ಬೆಳೆಸಿಕೊಂಡು ಒಳ್ಳೆ ಒಳ್ಳೆ ವಿಷಯ ಗಳನ್ನು ತಿಳಿದುಕೊಳ್ಳಿ ತಮಗೆ ಉಜ್ವಲ ಭವಿಷ್ಯವಿದೆ ಎಂದರು.

'ಶಿಕ್ಷಣ ಕಾಶಿ' ಎಂದೆ ಹೆಸರಾಗಿರುವ ತುಮಕೂರು ಜಿಲ್ಲೆಯಲ್ಲಿ 250 ಕ್ಕೂ ಹೆಚ್ಚು ಹಾಸ್ಟೆಲ್ ವಸತಿ ಶಾಲೆಗಳಿವೆ. ತಮಗೆ ಓದುವುದು ಬಿಟ್ಟು ಬೇರೆ ಕೆಲಸವಿಲ್ಲ. ಪ್ರತಿನಿತ್ಯ ಎರಡು ಗಂಟೆ ಶ್ರದ್ಧೆಯಿಂದ,ಪ್ರೀತಿಯಿಂದ ಉತ್ತಮ ಪುಸ್ತಕಗಳನ್ನು ಓದಿದರೆ ನಿಜಕ್ಕೂ ಸಮಾಜದಲ್ಲಿ ಉತ್ತಮ ಶಿಲ್ಪಿಯಾಗಿ ರೂಪಗೊಳ್ಳಬಹುದು.

ಸಮಾಜ ಕಲ್ಯಾಣ ಇಲಾಖೆ, ಬಿಸಿಎಂ, ಪರಿಶಿಷ್ಟ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ವತಿಯಿಂದ ಪದವಿ ವಿದ್ಯಾರ್ಥಿಗಳಿಗೆ/ನಿರುದ್ಯೋಗಿಗಳಿಗೆ ಅನುಕೂಲವಾಗಲೆಂದು ಈ ಕಾರ್ಯಗಾರ ವ್ಯವಸ್ಥೆ ಮಾಡಲಾಗಿದೆ. ಸಭೆ ಸಮಾರಂಭ, ವಿವಾಹ ಇನ್ನಿತರ ಶುಭ ಕಾರ್ಯಕ್ರಮಗಳಲ್ಲಿ ಹೂವನ್ನು ಬಳಸುತ್ತೇವೆ. ಹೂವಿನಿಂದ ಕಲಾಕೃತಿ ಹೇಗೆ ಮಾಡುವುದು ಎಂಬ ಬಗ್ಗೆ ಈ ಕಾರ್ಯಗಾರದಲ್ಲಿ ಬೆಂಗಳೂರಿನ ಶ್ರೀಮತಿ ವಿದ್ಯಾ ಯಾದವ್ ತಿಳಿಯಪಡಿಸಲಿದ್ದಾರೆ. ಶ್ರದ್ಧೆಯಿಂದ ಅವರು ಮಾಡುವ ಕಲಾಕೃತಿ ಮತ್ತು ಹೇಳುವ ವಿಷಯ ತಿಳಿದುಕೊಂಡು ತಾವು ಸ್ವಾವಲಂಬಿಗಳಾಗಿ ಜೀವನ ನಡೆಸಲು ಮುಂದಿನ ದಿನಗಳಲ್ಲಿ ಅನುಕೂಲವಾಗುತ್ತದೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಆರ್. ಕೃಷ್ಣಪ್ಪ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

## ರಾಷ್ಟ್ರ ಮಟ್ಟದ ಅಬಾಕಸ್ ಸ್ಪರ್ಧೆಯಲ್ಲಿ ಹುಳಿಯಾರಿನ 12 ಮಕ್ಕಳಿಗೆ ಮೆರಿಟ್ ಅವಾರ್ಡ್

ಹುಳಿಯಾರು: ಹೈದರಾಬಾದ್‌ನಲ್ಲಿ ನಡೆದ ರಾಷ್ಟ್ರಮಟ್ಟದ ಅಬಾಕಸ್ ಸ್ಪರ್ಧೆಯಲ್ಲಿ ಹುಳಿಯಾರಿನ ಆರಾ ಅಬಾಕಸ್ ಅಕಾಡೆಮಿಯ ಒಟ್ಟು 12 ವಿದ್ಯಾರ್ಥಿಗಳು ಮೆರಿಟ್ ಅವಾರ್ಡ್ ಪಡೆದಿರುವುದು ಸಂತಸದ ವಿಚಾರವಾಗಿದ್ದು, ಇದು ಇನ್ನಷ್ಟು ಮಕ್ಕಳಿಗೆ ಪ್ರೇರಣೆಯಾಗಲಿ ಎಂದು ವೈದ್ಯರಾದ ಡಾ.ವೈ.ಜಿ.ಸಿದ್ಧರಾಮಯ್ಯ ತಿಳಿಸಿದರು.




ಹುಳಿಯಾರಿನ ಆರಾ ಅಬಾಕಸ್ ಅಕಾಡೆಮಿಯಲ್ಲಿ ಅಬಾಕಸ್ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಸೋಮವಾರ ಟ್ರೋಫಿ ಹಾಗೂ ಪ್ರಮಾಣ ಪತ್ರ ಪದಕ ವಿತರಿಸಿ ಅವರು ಮಾತನಾಡಿದರು.

ಅಬಾಕಸ್ ಬಳಕೆಯಿಂದ ಮಕ್ಕಳಲ್ಲಿ ಜ್ಞಾಪಕ ಶಕ್ತಿ ಹಾಗೂ ಏಕಾಗ್ರತೆ ಹೆಚ್ಚಳವಾಗಿ, ಮೆದುಳಿನ ಶಕ್ತಿ ವೃದ್ಧಿಯಾಗಿ ಒಟ್ಟಾರೆಯಾಗಿ ಅವರ ಸಾಮರ್ಥ್ಯ ಹೆಚ್ಚಿ ಸದಾ ಕ್ರಿಯಾಶೀಲವಾಗಿರಲು ಕಾರಣವಾಗುತ್ತದೆ. ಮುಂದುವರಿದ ದೇಶವಾದ ಅಮೆರಿಕ ಚೀನಾದಲ್ಲಿ ಇಂದಿಗೂ ಸಹ ಲೆಕ್ಕ ಮಾಡಲು ಅಬಾಕಸ್ ಬಳಕೆಯಲ್ಲಿದ್ದು, ಅಬಾಕಸ್ ಬಳಕೆಯಿಂದ ಜ್ಞಾನ ವಿಕಾಸವಾಗುತ್ತದೆ ಎಂದರು.

ಚಾರ್ಟೆಡ್ ಅಕೌಂಟೆಂಟ್ ಕಾರ್ತಿಕ್ ಮಿನ್ನಾ ಮಾತನಾಡಿ ತುಂಬಾ ಪ್ರಾಚೀನ ಕಾಲದಿಂದಲೂ ಬಳಸುತ್ತಿರುವ ಅಬಾಕಸ್ ಮಕ್ಕಳ ಸಾಮರ್ಥ್ಯ ಹಾಗೂ ಆತ್ಮವಿಶ್ವಾಸ ಹೆಚ್ಚಿಸುವ ಸಾಧನವಾಗಿದ್ದು, ಕಂಪ್ಯೂಟರ್ ಕ್ಯಾಲ್ಕುಲೇಟರ್ ಇಲ್ಲದೇನೆ ಅದಕ್ಕಿಂತ ಮುಂಚಿತವಾಗಿಯೇ ಲೆಕ್ಕ ಮಾಡಿ ಹೇಳುವುದು ಇದರ ವಿಶೇಷತೆಯಾಗಿದೆ ಎಂದರು.

ಅಬಾಕಸ್ ತರಬೇತಿದಾರರಾದ ಲಕ್ಷ್ಮ ಮನೋಜ್ ಮಾತನಾಡಿ ಹೈದರಬಾದ್‌ನಲ್ಲಿ ಆನ್ಲೈನ್ ಮೂಲಕ ನಡೆದ ರಾಷ್ಟ್ರಮಟ್ಟದ ಅಬಾಕಸ್ ಸ್ಪರ್ಧೆಯಲ್ಲಿ ಹುಳಿಯಾರಿನ 14 ಮಕ್ಕಳು ಸಹ ಭಾಗವಹಿಸಿದ್ದು ಇದರಲ್ಲಿ 12 ಮಕ್ಕಳು ಶೇಕಡ 80 ಅಂಕಗಳಿಸಿದ್ದು, 12 ಮಕ್ಕಳಲ್ಲಿ 7 ಜನ ಮಕ್ಕಳಿಗೆ ಮೆರಿಟ್ ಅವಾರ್ಡ್ ಹಾಗೂ 5 ಜನ ಮಕ್ಕಳಿಗೆ ಚಾಂಪಿಯನ್ ಆಫ್ ಚಾಂಪಿಯನ್ ಅವಾರ್ಡ್ ಬಂದಿದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವರ್ತಕ ಮನೋಜ್ ಸೇರಿದಂತೆ ವಿದ್ಯಾರ್ಥಿಗಳ ಪೋಷಕರು ಪಾಲ್ಗೊಂಡಿದ್ದರು.

## ಯಶಸ್ವಿನಿ ಯೋಜನೆ : ನೋಂದಣಿಗೆ ಮಾ. 31 ಕಡೆಯ ದಿನ

ತುಮಕೂರು: ಸಹಕಾರ ಸಂಘ/ ಸಹಕಾರ ಬ್ಯಾಂಕುಗಳ ಸದಸ್ಯರ ಆರೋಗ್ಯ ರಕ್ಷಣಾ ಹಿತದೃಷ್ಟಿಯಿಂದ ಸರ್ಕಾರದಿಂದ ಅನುಷ್ಠಾನಗೊಳಿಸಿರುವ ಯಶಸ್ವಿನಿ ಆರೋಗ್ಯ ಯೋಜನೆಯಡಿ ನೋಂದಾಯಿಸಿಕೊಳ್ಳಲು ಮಾರ್ಚ್ 31 ಕಡೆಯ ದಿನವಾಗಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹಕಾರ ಸಂಘಗಳು/ಬ್ಯಾಂಕುಗಳಲ್ಲಿ ಸದಸ್ಯತ್ವ ಹೊಂದಿರುವ ಅರ್ಹ ಸದಸ್ಯರು ಸಂಬಂಧಿಸಿದ ಸಹಕಾರ ಸಂಘ/ ಬ್ಯಾಂಕುಗಳ ಮುಖ್ಯ ಕಾರ್ಯನಿರ್ವಾಹಕರನ್ನು ಸಂಪರ್ಕಿಸಿ ಯಶಸ್ವಿನಿ ಯೋಜನೆಯ ವಂತಿಕೆ ಮೊತ್ತವನ್ನು ಪಾವತಿಸಿ ನೋಂದಾಯಿಸಿಕೊಳ್ಳಬಹುದಾಗಿದೆ. ಪ.ಜಾತಿ ಹಾಗೂ ಪ.ಪಂಗಡಗಳಿಗೆ ಸೇರಿದ ಸದಸ್ಯರುಗಳಿಗೆ ವಂತಿಕೆ ಮೊತ್ತವನ್ನು ಪಾವತಿಸುವ ಅವಶ್ಯಕತೆಯಿರುವುದಿಲ್ಲ.

ಅರ್ಹ ಸದಸ್ಯರು ಮಾರ್ಚ್ 31ರೊಳಗಾಗಿ ಯಶಸ್ವಿ ಯೋಜನೆಗೆ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಯೋಜನೆಯ ಪ್ರಯೋಜನ ಪಡೆಯಬೇಕೆಂದು ಅವರು ಮನವಿ ಮಾಡಿದ್ದಾರೆ.

## 'ಘನತೆಗೆ ತಕ್ಕಂತೆ ಸ್ವಚ್ಛವಾಗಿದ್ದರೆ ಯಾರು ಏಕೆ ಹನಿ ಟ್ರಾಪ್ ಮಾಡುತ್ತಾರೆ?': ಬೇಗೂರು ನಾರಾಯಣ

ಕುಣಿಗಲ್: ಸಚಿವ ರಾಜಣ್ಣನವರು ಘನತೆಗೆ ತಕ್ಕಂತೆ ಸ್ವಚ್ಛವಾಗಿದ್ದರೆ ಯಾರು? ಏಕೆ? ಹನಿ ಟ್ರಾಪ್ ಮಾಡುತ್ತಾರೆ ಅಲ್ವಾ? ಎಂದು ತುಮುಲ್ ನಿರ್ದೇಶಕ ಹಾಗು ಕಾಂಗ್ರೆಸ್ ಮುಖಂಡ ಬೇಗೂರು ನಾರಾಯಣ ಹೇಳಿದ್ದಾರೆ.



ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ತಾಲೂಕಿನ ಲಿಂಕ್ ಕೆನಲ್ ಗೆ ವಿರೋಧ ಬೇಡ ಎಂದು ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು ಸಮುದ್ರದ ಪಾಲಾಗುತ್ತಿದ್ದ ನೀರನ್ನು ಉಪಯೋಗಿಸಿಕೊಳ್ಳಲು ಅಂದು ಹೇಮಾವತಿ ಡ್ಯಾಮ್ ಕಟ್ಟಿದ್ದಾರೆ ಆ ನೀರನ್ನು ತುಮಕೂರು ಜಿಲ್ಲೆಯ ಈ ಭಾಗದಲ್ಲಿ ಹೇಮಾವತಿ ಜಲನಾಲಯ ಪ್ರದೇಶದಲ್ಲಿ ಉಪಯೋಗಿಸಿಕೊಳ್ಳಲು ಅವಕಾಶವಿದೆ ಆದರೆ ಇದನ್ನು ಕೃಷ್ಣಾ ಬೇಸಿನ್ ಸೇರಿದಂತೆ ಇತರ ಪ್ರದೇಶಕ್ಕೆ ನೀರನ್ನು ಉಪಯೋಗಿಸಿಕೊಳ್ಳಲು ಅವಕಾಶವಿಲ್ಲ ಆದರೂ ಚಿಕ್ಕನಾಯಕನಹಳ್ಳಿ ಶಿರಾಗೂ ಇದೇ ನೀರನ್ನು ತೆಗೆದುಕೊಳ್ಳುತ್ತಿದಲ್ಲವಾ? ಈಗ ಲಿಂಕ್ ಕೆನಲ್ ಗೆ ವಿರೋಧ ಮಾಡದೆ ಸಹಕಾರ ನೀಡಬೇಕೆಂದರು.

ತಾಲೂಕು ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಣ್ಣ ಗೌಡ ಮಾತನಾಡಿ ಕುಣಿಗಲ್ ತಾಲೂಕಿನ ಪಾಲಿನ ಹೇಮಾವತಿ ನೀರು ಅನ್ನೋಕೇಶನ್ ಗೆ ತಕ್ಕಂತೆ ಯೋಜನೆಯಂತೆ ನೀರು ಹರಿಯುತ್ತಿಲ್ಲ ಹಾಗಾಗಿ ಲಿಂಕ್ ಕೆನಲ್ ಮೂಲಕ ಕುಣಿಗಲ್ ತಾಲೂಕಿನ ಪಾಲಿನ ನೀರನ್ನು ತೆಗೆದುಕೊಳ್ಳಲು ಯೋಜನೆ ಆರಂಭಗೊಂಡಿದೆ ಇದನ್ನು ಸಚಿವ ರಾಜಣ್ಣ ಹಾಗೂ ಕುಣಿಗಲ್ ತಾಲೂಕಿನ ಮತ ಪಡೆದು ಆಯ್ಕೆಯಾಗಿರುವ ಎಂಎಲ್ಸಿ ರಾಜೇಂದ್ರ ರಾಜಣ್ಣನವರು ಕೂಡ ಸಹಕಾರ ನೀಡಬೇಕೆಂದು ಒತ್ತಾಯಿಸಿದರು.

ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಉಪಮುಖ್ಯಮಂತ್ರಿಗಳಾಗಿದ್ದ ಆಗಿರುವ ಡಿಕೆ ಶಿವಕುಮಾರ್ ರವರು ಶಾಸಕ ಡಾಕ್ಟರ್ ರಂಗನಾಥ್ ರವರ ಒತ್ತಾಯದ ಮೇರೆಗೆ ಲಿಂಕ್ ಕೆನಾಲ್ಗೆ ಸುಮಾರು 950 ಕೋಟಿ ಹಣ ನೀಡುವ ಮೂಲಕ ಅನುಮೋದನೆ ನೀಡಿ ಕಾಮಗಾರಿ ಪ್ರಾರಂಭಿಸಲಾಗಿದೆ ಇದಕ್ಕೆ ವಿರೋಧ ಮಾಡದೆ ಸಹಕಾರ ನೀಡಬೇಕೆಂದು ಸಹಕಾರ ಸಚಿವ ರಾಜಣ್ಣ ಹಾಗೂ ಎಂಎಲ್ಸಿ ರಾಜೇಂದ್ರರವರಲ್ಲಿ ತಾಲೂಕಿನ ರೈತರ, ಸಾರ್ವಜನಿಕರ ಪರವಾಗಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿ ಎಸ್ ಎಸ್ ಎಲ್ ಅಧ್ಯಕ್ಷ ಬೋರೇಗೌಡ, ಕಾಂಗ್ರೆಸ್ ಮುಖಂಡರಾದ ಸುಂದರಕುಪ್ಪೆ ಪಾಪಣ್ಣ, ಮಲ್ಯ ನಾಗರಾಜ್, ನರಸಿಂಹಮೂರ್ತಿ, ಶಂಕರ್, ಮಾಜಿ ತಾಪಂ ಸದಸ್ಯ ರಾಜಣ್ಣ, ಮಾಜಿ ಗ್ರಾ.ಪಂ ಅಧ್ಯಕ್ಷ ಬೇಗೂರು ಮೂರ್ತಿ, ಪುರಸಭಾ ಉಪಾಧ್ಯಕ್ಷ ಶ್ರೀನಿವಾಸ್ ಪುರಸಭಾ ಸದಸ್ಯರುಗಳಾದ ಅರುಣ್ ಕುಮಾರ್, ದೇವರಾಜ್ ಸೇರಿದಂತೆ ಇತರರು ಇದ್ದರು

## ವಿಜ್ಞಾನ ಕೇಂದ್ರದ ವತಿಯಿಂದ 37ನೇ ಬೇಸಿಗೆ ವಿಜ್ಞಾನ ಶಿಬಿರ

ತುಮಕೂರು ವಿಜ್ಞಾನ ಕೇಂದ್ರದಿಂದ 12 ರಿಂದ 16 ವಯೋಮಾನದ 50 ಮಕ್ಕಳಿಗೆ ಬೇಸಿಗೆ ವಿಜ್ಞಾನ ಶಿಬಿರವನ್ನು ಹಮ್ಮಿಕೊಂಡಿದೆ. ದಿನಾಂಕ :15-04-2025 ರಿಂದ 21-04-2025 ರವರೆಗೆ ತುಮಕೂರು ಚಿಕ್ಕಪೇಟೆಯ ಗಾರ್ಡನ್ ರಸ್ತೆಯಲ್ಲಿರುವ ವಿಶ್ವೇಶ್ವರಯ್ಯ ವಿಜ್ಞಾನ ಭವನದಲ್ಲಿ ಬೇಸಿಗೆ ವಿಜ್ಞಾನ ಶಿಬಿರ ನಡೆಯಲಿದೆ.

37ನೇ ವರ್ಷದ ಬೇಸಿಗೆ ವಿಜ್ಞಾನ ಶಿಬಿರದಲ್ಲಿ ಮಕ್ಕಳಿಂದ ಗಣಿತ ಮತ್ತು ವಿಜ್ಞಾನ ಮಾದರಿಗಳನ್ನು ಮಾಡಿಸಲಾಗುತ್ತದೆ. ಬೆರಳತುದಿಯಲಿ ಬೆಳ್ಳಿ ಚುಕ್ಕಿ, ಮಕ್ಕಳಿಗೆ ಅಹೋರಾತ್ರಿ ಆಕಾಶ ವೀಕ್ಷಣೆ ಮಾಡಿಸಲಾಗುತ್ತದೆ. ನಕ್ಷತ್ರ ಪುಂಜಗಳ ಪರಿಚಯ ಮಾಡಿಸುತ್ತಾ ಖಗೋಳ ವೀಕ್ಷಣೆ ಯ ಹವ್ಯಾಸವನ್ನು ರೂಢಿಸಿಕೊಳ್ಳುವ ಮಾರ್ಗಗಳನ್ನು ತೋರಿಸಲಾಗುತ್ತದೆ. ಇದೊಂದು ಜಗತ್ತಿನ ವಿಶಿಷ್ಟ ಹವ್ಯಾಸವಾಗಿದ್ದು, ಇಡೀ ಜಗತ್ತು ಕುತೂಹಲದಿಂದ ನೋಡುವ ಕ್ಷೇತ್ರವಾಗಿದೆ. ಮನುಷ್ಯರ ಜೊತೆಯಲ್ಲಿ ಸಾವಿರಾರು ವರ್ಷಗಳಿಂದ ಸ್ವಾವಲಂಬಿ ಗಳಾಗಿ ಬದುಕುತ್ತಿರುವ ಹಕ್ಕಿಗಳ ಬದುಕು, ಆಹಾರ ಪದ್ಧತಿ, ಗೂಡು ಕಟ್ಟುವ ವಿಧಾನಗಳು, ಕೌಟುಂಬಿಕ ವ್ಯವಸ್ಥೆ, ವಲಸೆ, ಪರಿಸರ ಹಾಗೂ ಮನುಷ್ಯ ಸ್ನೇಹಿಯಾಗಿ ಇರುವ ಪಕ್ಷಿಗಳ ಪರಿಚಯ. ಮಾಡಿಸಲಾಗುತ್ತದೆ. ಜೀವ ವೈವಿಧ್ಯತೆ ಅಧ್ಯಯನ ಮಾಡಿಸಲಾಗುತ್ತದೆ.

ಈ ಕಾರ್ಯಕ್ರಮ ಇದ್ದ ದಿವಸ ಪೋಷಕರು ಭಾಗವಹಿಸಲು ಅವಕಾಶ ಕಲ್ಪಿಸಲಾಗುತ್ತದೆ. ವಿಜ್ಞಾನಿಗಳೊಡನೆ ಸಂವಾದ ಮಕ್ಕಳು ವಿಜ್ಞಾನ ವಿಷಯ ಕುರಿತು ತಮ್ಮ ಕುತೂಹಲಭರಿತ ಪ್ರಶ್ನೆಗಳನ್ನು ಕೇಳಿ ತಿಳಿದುಕೊಳ್ಳಬಹುದಾಗಿರುತ್ತದೆ. ನಮ್ಮ ದೇಹ ಅದರ ರಚನೆ ಕಾರ್ಯವಿಧಾನ,ಪೋಷಣೆ, ಆರೋಗ್ಯವಂತ ಬದುಕು ಎಂದರೇನು ಮುಂತಾದ ವಿಷಯಗಳ ಕುರಿತು ವೈದ್ಯರೊಡನೆ ಚರ್ಚೆ ಏರ್ಪಡಿಸಲಾಗುತ್ತದೆ. ಜನರೆಡೆಗೆ ವಿಜ್ಞಾನ ಎಂಬ ಸದಾಶಯದಲ್ಲಿ ತುಮಕೂರು ವಿಜ್ಞಾನ ಕೇಂದ್ರ ತಮ್ಮ ಪರಿಚಿತ ಹಾಗೂ ವಿಷಯ ಪ್ರಬುದ್ಧತೆ ಇರುವ ಸಂಪನ್ಮೂಲ ವ್ಯಕ್ತಿಗಳೊಂದಿಗೆ 12 ರಿಂದ 16ರ ವಯೋಮಾನದ 50ಮಕ್ಕಳಿಗೆ ಈ ಶಿಬಿರವನ್ನು ಆಯೋಜಿಸಲಾಗಿದೆ. ಶಿಬಿರಕ್ಕೆ ಹೆಸರು ನೊಂದಾಯಿಸಲು ಶಿಬಿರದ ಸಂಚಾಲಕರಾದ ಏ. ನಾಗರಾಜರಾವ್ 9164888006 ಹಾಗೂ ಖ ಉ ಶಿವಲಿಂಗಯ್ಯ 9980576340. ರವರುಗಳನ್ನು ಸಂಪರ್ಕಿಸಬಹುದಾಗಿದೆ.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper